[illegible], Page-07, 11/1/17

ಸೌರಶಕ್ತಿ ಉತ್ಪಾದನೆ 6 ಸಾವಿರ ಮೆ.ವ್ಯಾ.ಗೆ ಹೆಚ್ಚಳ

■ ಅವಕಾಶವಿರುವ ಎಲ್ಲ ತಾಲೂಕುಗಳಲ್ಲಿ ಸೌರ ಘಟಕ ■ ಇದಕ್ಕಾಗಿ ಸೌರ ವಿದ್ಯುತ್ ನೀತಿ ಮಾರ್ಪಾಡು

ಬೆಂಗಳೂರು: ಸೌರ ವಿದ್ಯುತ್ ಉತ್ಪಾದನೆಯ ಗುರಿ ಹೆಚ್ಚಿಸಲು ಹಾಗೂ ಸೌರ ವಿದ್ಯುತ್ ಉತ್ಪಾದನೆಗೆ ಅವಕಾಶವಿರುವ ರಾಜ್ಯದ ಪ್ರತಿ ತಾಲೂಕಿನಲ್ಲೂ ಸೌರ ವಿದ್ಯುತ್ ಉತ್ಪಾದನಾ ಘಟಕಗಳ ಸ್ಥಾಪನೆಗೆ ಉತ್ತೇಜನ ನೀಡುವ ಉದ್ದೇಶದಿಂದ ಹಾಲಿ ಚಾಲ್ತಿಯಲ್ಲಿರುವ 'ಕರ್ನಾಟಕ ಸೌರ ವಿದ್ಯುತ್ ನೀತಿ: 2014-21'ರ ನಿಯಮಗಳಲ್ಲಿ ಕೆಲವೊಂದು ತಿದ್ದುಪಡಿಗಳನ್ನು ಮಾಡಲು ಸರ್ಕಾರ ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಸಭೆ ಬಳಿಕ ಕಾನೂನು ಸಚಿವ ಟಿ.ಬಿ. ಜಯಚಂದ್ರ ಸುದ್ದಿಗಾರರಿಗೆ ತಿಳಿಸಿದರು.

ಸೌರ ವಿದ್ಯುತ್ ನೀತಿಯಡಿ 2021ರ ಮಾರ್ಚ್ ವೇಳೆಗೆ 2 ಸಾವಿರ ಮೆ.ವ್ಯಾ. ವಿದ್ಯುತ್ ಉತ್ಪಾದನೆ ಗುರಿ ಇಟ್ಟುಕೊಳ್ಳಲಾಗಿತ್ತು. ಆದರೆ, ಅದನ್ನು 6 ಸಾವಿರ ಮೆ.ವ್ಯಾ. ಗೆ ಹೆಚ್ಚಿಸಲು ನಿಯಮಗಳಲ್ಲಿ ತಿದ್ದುಪಡಿ ತರಲು ನಿರ್ಧರಿಸಲಾಗಿದೆ. ಅದೇ ರೀತಿ ಈಗಿರುವ ನೀತಿ ಅನ್ವಯ ಕೆಲ ತಾಲೂಕುಗಳಲ್ಲಿ ಮಾತ್ರ ಸೌರ ವಿದ್ಯುತ್ ಉತ್ಪಾದನೆಯ ಹೆಚ್ಚು ಪ್ರಸ್ತಾವನೆಗಳು ಬರುತ್ತಿದ್ದವು. ಅಲ್ಲದೇ ಉತ್ಪಾದನಾ ಮಿತಿಯು ನಿಗದಿ ಇರಲಿಲ್ಲ. ಆದ್ದರಿಂದ ಸೌರ ವಿದ್ಯುತ್ ಉತ್ಪಾದನೆಗೆ ಅವಕಾಶವಿರುವ ರಾಜ್ಯದ ಎಲ್ಲಾ ತಾಲೂಕುಗಳಲ್ಲಿಯೂ ವಿದ್ಯುತ್ ಉತ್ಪಾದನಾ ಘಟಕಗಳ ನಿರ್ಮಾಣಕ್ಕೆ ಅವಕಾಶ ಮಾಡಿಕೊಡಬೇಕು ಮತ್ತು ಉತ್ಪಾದನಾ ಮಿತಿಯನ್ನು 200 ಮೆ.ವ್ಯಾ. [illegible] ಸಚಿವ ಸಂಪುಟ ಸಭೆಯಲ್ಲಿ [illegible] ಎಂದರು.

[illegible] ಸೌರ ವಿದ್ಯುತ್ ನೀತಿಯಡಿ ಇಂಧನ ಇಲಾಖೆಯಿಂದ ಸ್ಥಾಪಿಸಲು ಉದ್ದೇಶಿಸಲಾಗಿದ್ದ 'ಭೂ ಬ್ಯಾಂಕ್' (ಲ್ಯಾಂಡ್ ಬ್ಯಾಂಕ್) ಪ್ರಸ್ತಾವ ಕೈ ಬಿಡಲು ತೀರ್ಮಾನಿಸಲಾಗಿದೆ. ಜೊತೆಗೆ ಸೌರ ವಿದ್ಯುತ್ ಕ್ಷೇತ್ರದಲ್ಲಿ ಸಂಶೋಧನೆ, ಅವಿಷ್ಕಾರ, ಕೌಶಲ್ಯ ಅಭಿವೃದ್ಧಿಗೆ ಉತ್ತೇಜನ ನೀಡುವ ದೃಷ್ಟಿಯಿಂದ ರಾಜ್ಯ ಮಟ್ಟದ 'ಸೋಲಾರ್ ಎನರ್ಜಿ ಸೆಂಟರ್ ಆಫ್ ಎಕ್ಸಲೆನ್ಸ್ ಆ್ಯಂಡ್ ಇನ್‌ಕ್ಯೂಬೆಷನ್ ಸೆಂಟರ್' ಸ್ಥಾಪನೆಗೆ ಅವಕಾಶ ಆಗುವಂತೆ ಈಗಿರುವ ನೀತಿಯ ನಿಮಯಗಳಲ್ಲಿ ತಿದ್ದುಪಡಿ ತರಲು ನಿರ್ಧರಿಸಲಾಗಿದೆ ಎಂದು ಜಯಚಂದ್ರ ತಿಳಿಸಿದರು.

ಸಚಿವ ಸಂಪುಟ ಸಭೆ ನಿರ್ಧಾರ

550 ಪಶು ವೈದ್ಯರ ನೇಮಕ: ಪಶು ವೈದ್ಯಕೀಯ ಇಲಾಖೆಯ ಗ್ರಾಮೀಣ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ 100 ಬ್ಯಾಕ್‌ಲಾಗ್ ಹುದ್ದೆಗಳು ಹಾಗೂ ಪಶು ವೈದ್ಯರು ಸೇರಿದಂತೆ 550 ವಿವಿಧ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಅರ್ಹತೆ ಹಾಗೂ ಮೀಸಲಾತಿ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಗದಗ ಜಿಲ್ಲೆಯ ನರಗುಂದದ ಸರ್ಕಾರಿ ಇಂಜಿನಿಯರ್ ಕಾಲೇಜು ಕಟ್ಟಡ ನಿರ್ಮಾಣಕ್ಕೆ 58 ಕೋಟಿ ರೂ.ಗಳ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕರ್ನಾಟಕ ರಾಜ್ಯ ಹಣಕಾಸು ನಿಗಮಕ್ಕೆ 75 ಕೋಟಿ ರೂ. ಶೇರು ಬಂಡವಾಳ ಕೊಡಲು ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ಜಯಚಂದ್ರ ತಿಳಿಸಿದರು.

ಪೊಲೀಸರ ಮನೆಗೆ 2272 ಕೋಟಿ: ಪೊಲೀಸ್ ಗೃಹ-2020 ಯೋಜನೆಯಡಿ 10 ಸಾವಿರ ವಸತಿಗೃಹಗಳ ನಿರ್ಮಾಣಕ್ಕೆ 1,818 ಕೋಟಿ ರೂ. ವೆಚ್ಚದ ಯೋಜನೆ ರೂಪಿಸಲಾಗಿತ್ತು. ಆದರೆ, ಹೆಚ್ಚುವರಿ ಅನುದಾನದ ಬೇಡಿಕೆ ಬಂದ ಹಿನ್ನೆಲೆಯಲ್ಲಿ ಯೋಜನಾ ವೆಚ್ಚವನ್ನು 2,272.03 ಕೋಟಿ ರೂ. ಹೆಚ್ಚಿಸಲಾಗಿದೆ. ಶಿವಮೊಗ್ಗ ಜಿಲ್ಲಾ ಕಾರಾಗೃಹವನ್ನು ಕೇಂದ್ರ ಕಾರಾಗೃಹವನ್ನಾಗಿ ಘೋಷಿಸಲು ಅಗತ್ಯವಿರುವ ವಿವಿಧ 134 ಹುದ್ದೆಗಳ ಭರ್ತಿ ಹಾಗೂ 18 ವಾಹನಗಳ ಖರೀದಿಗೆ ಸಚಿವ ಸಂಪುಟ ಅನುಮತಿ ನೀಡಿದೆ.

ಟೋಲ್ ರಸ್ತೆ: ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ-ಕೆಂಪಾಪುರ ರಾಜ್ಯ ಹೆದ್ದಾರಿ 96ರಲ್ಲಿ ವಿಜಯಪುರ ಹಾಗೂ ವೇಮಗಲ್ ಮಾರ್ಗವಾಗಿ ದೇವನಹಳ್ಳಿಯಿಂದ ಕೋಲಾರದವರೆಗೆ 49 ಕಿ.ಮೀ ಉದ್ದದ ಟೋಲ್ ರಸ್ತೆಯನ್ನು 148 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

195 ಸೇತುವೆಗಳ ನಿರ್ಮಾಣ

ಬೆಂಗಳೂರು: ರಾಜ್ಯದ ಪ್ರಮುಖ ರಸ್ತೆಗಳಿಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಮುಂದಿನ ಮೂರು ಆರ್ಥಿಕ ವರ್ಷಗಳಲ್ಲಿ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದಿಂದ 1,395.58 ಕೋಟಿ ರೂ. ವೆಚ್ಚದಲ್ಲಿ ಒಟ್ಟು 195 ಸೇತುವೆಗಳನ್ನು ನಿರ್ಮಾಣ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಸಚಿವ ಸಂಪುಟದ ಆಡಳಿತಾತ್ಮಕ ಅನುಮೋದನೆಯಂತೆ 2017-18ನೇ ಆರ್ಥಿಕ ವರ್ಷದಲ್ಲಿ 350 ಕೋಟಿ ರೂ. 2018-19ನೇ ಸಾಲಿನಲ್ಲಿ 450 ಕೋಟಿ ರೂ. ಹಾಗೂ 2019-20ರಲ್ಲಿ 495.98 ಕೋಟಿ ರೂ.ಗಳಂತೆ ಒಟ್ಟು 1,395.58 ಕೋಟಿ ರೂ. ವೆಚ್ಚ ಮಾಡಲಾಗುವುದು. ರಾಜ್ಯದ ಪ್ರಮುಖ ರಸ್ತೆಗಳಲ್ಲಿ ನೆಡುತೋಪು ಅಭಿವೃದ್ಧಿಗೆ ರಸ್ತೆ ನಿರ್ಮಾಣದ ಒಟ್ಟು ಯೋಜನೆಯಲ್ಲಿ ಶೇ.1ರಷ್ಟು ಉಪಕರವನ್ನು ಸಂಗ್ರಹಿಸಿ ಅಭಿವೃದ್ಧಿಪಡಿಸಲು ರಾಜ್ಯ ರಸ್ತೆ ಅಭಿವೃದ್ಧಿ ನಿಗಮಕ್ಕೆ ಸಚಿವ ಸಂಪುಟ ಅನುಮತಿ ನೀಡಿದೆ.

ಐಟಿಐ ಎಸ್ಸಿ, ಎಸ್ಟಿ ಅಭ್ಯರ್ಥಿಗಳಿಗೆ ಶೂ-ಸಾಕ್ಸ್

ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 10,380 ಅಭ್ಯರ್ಥಿಗಳಿಗೆ ಎಸ್‌ಸಿಪಿ-ಟಿಎಸ್‌ಪಿ ಯೋಜನೆಯ ಉಳಿಕೆ ಅನುದಾನದಲ್ಲಿ 10.22 ಕೋಟಿ ರೂ. ವೆಚ್ಚದಲ್ಲಿ ಉಚಿತವಾಗಿ ಶೂ ಹಾಗೂ ಸಾಕ್ಸ್‌ಗಳನ್ನು ವಿತರಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಅದೇ ರೀತಿ 47.84 ಕೋಟಿ ರೂ. ವೆಚ್ಚದಲ್ಲಿ ಟೂಲ್‌ಕಿಟ್‌ಗಳನ್ನು ವಿತರಿಸುವ ಪ್ರಸ್ತಾವನೆಗೆ ಸಂಪುಟ ಸಭೆ ಅನುಮೋದನೆ ಕೊಟ್ಟಿದೆ.

ನಳಂದ ವಿವಿ ಸ್ಥಾಪನೆಗೆ 25 ಎಕರೆ ಜಮೀನು

ಬೆಂಗಳೂರು: ನಳಂದ ವಿಶ್ವವಿದ್ಯಾಲಯ ಸ್ಥಾಪನೆಗೆ ಚಾಮರಾಜನಗರದ ಇಂಟರ್‌ನ್ಯಾಷನಲ್ ಬುದ್ಧಿಸ್ಟ್ ಮಾಂಕ್ಸ್ ಚಾರಿಟೆಬಲ್ ಟ್ರಸ್ಟ್ ಇವರಿಗೆ ಚಾಮರಾಜನಗರ ಜಿಲ್ಲೆ ಉತ್ತುವಳ್ಳಿ ಗ್ರಾಮದ ಸರ್ವೆ ನಂಬರ್ 117ರಲ್ಲಿ ಇರುವ 464.36 ಎಕರೆ ಪೈಕಿ 25 ಎಕರೆ ಗೋಮಾಳ ಜಮೀನು ಮಂಜೂರು ಮಾಡಲು ಮಂಗಳವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

133 ಮಿನಿಬಸ್‌ಗಳ ಖರೀದಿ

ಬೆಂಗಳೂರು: ನಗರ ಪ್ರದೇಶಗಳ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ನರ್ಮ್-2 ಯೋಜನೆಯಡಿ 32.23 ಕೋಟಿ ರೂ. ವೆಚ್ಚದಲ್ಲಿ ಅತ್ಯಾಧುನಿಕ ಮಿನಿ ಬಸ್‌ಗಳ ಖರೀದಿಗೆ ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ. 133 ಮಿನಿ ಬಸ್‌ಗಳ ಖರೀದಿಗೆ ಒಟ್ಟು 32.23 ಕೋಟಿ ರೂ. ವೆಚ್ಚ ಆಗಲಿದ್ದು, ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲು 60:40 ಇರಲಿದೆ. ಅವರಂತೆ ಕೇಂದ್ರ ಸರ್ಕಾರ 19.34 ಕೋಟಿ, ರಾಜ್ಯ ಸರ್ಕಾರ 9.67 ಕೋಟಿ ಹಾಗೂ ಸಾರಿಗೆ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಂದ 3.22 ಕೋಟಿ ರೂ. ವೆಚ್ಚ ಭರಿಸಲಾಗುವುದು. ಇದರಿಂದ ನಗರ ಪ್ರದೇಶಗಳಲ್ಲಿ ದೊಡ್ಡ ಬಸ್‌ಗಳ ಬದಲು ಮಿನಿ ಬಸ್‌ಗಳನ್ನು ಬಳಸಿಕೊಳ್ಳಲು ಅನುಕೂಲವಾಗಲಿದೆ ಎಂದು ಸಭೆ ಬಳಿಕ ಜಯಚಂದ್ರ ತಿಳಿಸಿದರು.

ಸಂಪುಟ ಇತರ ತೀರ್ಮಾನಗಳು

1 ಎನ್‌ಆರ್‌ಎಚ್‌ಎಂ ಯೋಜನೆಯಡಿ 103 ಕೋಟಿ ರೂ. ವೆಚ್ಚದಲ್ಲಿ ಡಯೋಗ್ನೋಸ್ಟಿಕ್ ಯಂತ್ರಗಳ ಖರೀದಿಗೆ ಒಪ್ಪಿಗೆ.

2 ಕಲಬುರಗಿಯಲ್ಲಿ 47.10 ಕೋಟಿ ರೂ. ವೆಚ್ಚದಲ್ಲಿ ಲೋಕೋಪಯೋಗಿ ಭವನ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮತಿ.

3 ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಕಟ್ಟಡ ನಿರ್ಮಾಣಕ್ಕೆ ಹೆಚ್ಚುವರಿ 29.60 ಕೋಟಿ ರೂ. ಅನುದಾನ.

4 ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ 22 ಕೋಟಿ ರೂ. ವೆಚ್ಚದಲ್ಲಿ 3-ಡಿ ತಾರಾಲಯ ನಿರ್ಮಾಣಕ್ಕೆ ಅಸ್ತು

5 ನಾಡಪ್ರಭು ಕೆಂಪೇಗೌಡ ಪ್ರಾಧಿಕಾರಕ್ಕೆ ಉಪಾಧ್ಯಕ್ಷರಾಗಿ ಇಂಧನ ಸಚಿವ ಡಿ.ಕೆ. ಶಿವಕುಮಾರ ನೇಮಕ.

6 ಸಂತ ಸೇವಾಲಾಲ್ ಜನ್ಮಸ್ಥಳ ಮಹಾಮಠ ಸಮಿತಿಗೆ 13.20 ಎಕರೆ ಜಮೀನು ಮಂಜೂರು.

Hosa Digantha, 11/1/2017

ಸೇತುವೆ ನಿರ್ಮಿಸಿ ರಾಜ್ಯ ಹೆದ್ದಾರಿಗಳಿಗೆ ಸಂಪರ್ಕ ಕಲ್ಪಿಸುವ ಯೋಜನೆ

3 ವರ್ಷದಲ್ಲಿ 195 ಸೇತುವೆ ಪುನರ್ ನಿರ್ಮಾಣ

ಬೆಂಗಳೂರು: ರಾಜ್ಯ ಹೆದ್ದಾರಿಗಳಿಗೆ ಸಂಪರ್ಕ ಕಲ್ಪಿಸಲು ಸುಮಾರು 1395 ಕೋಟಿ ರೂ.ಗಳಲ್ಲಿ 195 ಸೇತುವೆಗಳನ್ನು ಪುನರ್ ನಿರ್ಮಾಣ ಮಾಡಲು ಸರ್ಕಾರ ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಸಚಿವ ಟಿ.ಬಿ.ಜಯಚಂದ್ರ, ರಾಜ್ಯ ರಸ್ತೆ ಅಭಿವೃದ್ಧಿ ನಿಗಮದಿಂದ ಮುಂದಿನ 3 ವರ್ಷದಲ್ಲಿ 1395.58 ಕೋಟಿ ರೂ. ವೆಚ್ಚದಲ್ಲಿ 195 ಸೇತುವೆ ನಿರ್ಮಾಣ ಮಾಡಲಾಗುವುದು. 2017-18 ನೇ ಸಾಲಿನಲ್ಲಿ 350 ಕೋಟಿ ರೂ., 2018-19 ನೇ ಸಾಲಿನಲ್ಲಿ 450 ಕೋಟಿ ರೂ. ಹಾಗೂ 2019-20 ನೇ ಸಾಲಿನಲ್ಲಿ 495.58 ಕೋಟಿ ರೂ. ವೆಚ್ಚದಲ್ಲಿ ಪ್ರಮುಖ ಸೇತುವೆ ನಿರ್ಮಿಸಿ ರಾಜ್ಯ ಹೆದ್ದಾರಿಗಳಿಗೆ ಸಂಪರ್ಕ ಕಲ್ಪಿಸಲಾಗುವುದು ಎಂದರು.

ಸೌರ ನೀತಿಗೆ ತಿದ್ದುಪಡಿ

ಸೌರ ವಿದ್ಯುತ್ ನೀತಿ ಅನ್ವಯ ತುಮಕೂರು, ಕೋಲಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಎಲ್ಲಾ ತಾಲೂಕುಗಳಲ್ಲಿ ಮನೆಯ ಮೇಲ್ಛಾವಣಿಯಲ್ಲಿ ಸೌರ ವಿದ್ಯುತ್ ಉತ್ಪಾದನೆಗೆ ಉತ್ತಮ ಅವಕಾಶವಿದೆ. ಇದಕ್ಕಾಗಿ ಸೌರ ವಿದ್ಯುತ್ ನೀತಿಗೆ ತಿದ್ದುಪಡಿ ತರಲು ಸಂಪುಟ ಸಮ್ಮತಿಸಿದೆ. ರಾಜ್ಯದಲ್ಲಿ ಹಂತ ಹಂತವಾಗಿ ಸೌರ ವಿದ್ಯುತ್ ಘಟಕ ಸ್ಥಾಪನೆಗೆ ಉತ್ತೇಜನ ನೀಡಲಾಗುವುದು. ರಾಜ್ಯದಲ್ಲಿ 20700 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಅವಕಾಶವಿದ್ದು, 2014-21 ರ ರಾಜ್ಯ ಸೌರ ವಿದ್ಯುತ್ ನೀತಿಗೆ ತಿದ್ದುಪಡಿ ನೀಡಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದರು.


ರಾಜ್ಯ ಸಚಿವ ಸಂಪುಟ ಸಭೆ

ಮಿನಿ ಬಸ್ ಖರೀದಿ

ನಗರ ಪ್ರದೇಶಗಳಲ್ಲಿ ನರ್ಮ-2 ಯೋಜನೆಯಡಿ ಆಧುನಿಕ 133 ಮಿನಿ ಬಸ್ ಖರೀದಿಸಲು ಸಂಪುಟ ಒಪ್ಪಿಗೆ ನೀಡಿದೆ. ನಗರ ಪ್ರದೇಶದ ತುಮಕೂರು, ಶಿವಮೊಗ್ಗ ಸೇರಿದಂತೆ ನಗರಗಳಲ್ಲಿ ದೊಡ್ಡ ಬಸ್‌ಗಳ ಬದಲು ಮಿನಿ ಬಸ್ ಸಂಚಾರದ ಮೂಲಕ ವಾಹನ ದಟ್ಟಣೆ ಕಡಿಮೆ ಮಾಡಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಂದ ಒಟ್ಟು 32.23 ಕೋಟಿ ರೂ. ವೆಚ್ಚದಲ್ಲಿ 133 ಬಸ್ ಖರೀದಿಸಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಸಮೂಹಕ್ಕೆ ಸೇರ್ಪಡೆ ಮಾಡಲಾಗುವುದು ಎಂದರು.

ನಳಂದ ವಿಶ್ವವಿದ್ಯಾಲಯ ಸ್ಥಾಪನೆ

ಚಾಮರಾಜನಗರ ಜಿಲ್ಲೆ ಉತ್ತುವಳ್ಳಿ ಗ್ರಾಮದಲ್ಲಿ ನಳಂದ ವಿಶ್ವವಿದ್ಯಾಲಯ ಸ್ಥಾಪಿಸಲು ಇಂಟರ್ ನ್ಯಾಷನಲ್ ಬುದ್ದಿಸ್ಟ್ ಮಾಂಕ್ಸ್ ಟ್ರಸ್ಟ್ ಗೆ ಶೇ.50 ರಷ್ಟು ದರದಲ್ಲಿ 25 ಎಕರೆ ಗೋಮಾಳ ನೀಡುವುದು. ಸೂರಗೊಂಡನ ಕೊಪ್ಪದಲ್ಲಿ ಸಂತ ಸೇವಾಲಾಲ್ ಜನ್ಮಸ್ಥಳ ಮಹಾಮಠ ಸಮಿತಿಗೆ ದಾವಣಗೆರೆ ಜಿಲ್ಲೆಯ ಚಿನ್ನಿಕಟ್ಟೆ ಗ್ರಾಮದಲ್ಲಿ 13.20 ಎಕರೆ ಜಮೀನು ಮಾರುಕಟ್ಟೆ ದರದಲ್ಲಿ ಖರೀದಿಸಲು ಒಪ್ಪಿಗೆ. 2016-17ನೆ ಸಾಲಿನಲ್ಲಿ ಸರ್ಕಾರಿ ಅನುದಾನಿತ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 10380 ಮಂದಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಸಮ್ಮತಿಸಲಾಗಿದೆ ಎಂದರು.

ಟೋಲ್ ರಸ್ತೆ ನಿರ್ಮಾಣ

ದೇವನಹಳ್ಳಿ-ಕೆಂಪಾಪುರ ರಾಜ್ಯ ಹೆದ್ದಾರಿ ಸಂಖ್ಯೆ 96ರ 49ಕಿಮೀ ವರೆಗೆ 148 ಕೋಟಿ ರೂ. ವೆಚ್ಚದಲ್ಲಿ ರಸ್ತೆ ನಿರ್ಮಿಸಿ ಹದಿನೆಂಟೂವರೆ ವರ್ಷ ಟೋಲ್ ಸಂಗ್ರಹಕ್ಕೆ ಸಂಪುಟ ಅನುಮತಿ ನೀಡಿದೆ.

■ ಟಿ.ಬಿ.ಜಯಚಂದ್ರ, ಸಚಿವ

ಪೊಲೀಸರಿಗೆ ಮನೆ

ಪೊಲೀಸ್ ಗೃಹಯೋಜನೆಯಡಿ 11 ಸಾವಿರ ವಸತಿ ಗೃಹ ನಿರ್ಮಿಸಲು 2027.37 ಕೋಟಿ ರೂ. ಪರಿಷ್ಕತ ಅಂದಾಜು ಪಟ್ಟಿಗೆ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದೆ. ಹುಡ್ಕೋ ಸೇರಿದಂತೆ ಯಾವುದೇ ಹಣಕಾಸು ಸಂಸ್ಥೆಯಲ್ಲಿ 1363 ಕೋಟಿ ರೂ. ಸಾಲ ಪಡೆಯಲು ಸರ್ಕಾರ ಖಾತ್ರಿ ನೀಡಲಿದೆ.

ಶಿವಮೊಗ್ಗ ಜಿಲ್ಲಾ ಕಾರಾಗೃಹ ಉನ್ನತೀಕರಿಸುವ ಯೋಜನೆಯಡಿ 100 ಮಹಿಳಾ ಕೈದಿ ಹಾಗೂ 500 ಪುರುಷ ಕೈದಿಗಳಿಗೆ ಕೊಠಡಿ ನಿರ್ಮಿಸಲಾಗುತ್ತಿದೆ. ಅಲ್ಲದೆ 134 ಹುದ್ದೆ ಸೃಷ್ಟಿಸಿ ವಿವಿಧ 18 ವಾಹನಗಳ ಖರೀದಿಸಲು ಅನುಮತಿ ನೀಡಲಾಗಿದೆ. ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ 100 ಬ್ಯಾಕ್‌ಲಾಗ್ ಹುದ್ದೆಗಳು ಸೇರಿದಂತೆ 550 ಹುದ್ದೆ ನೇಮಕಾತಿಗೆ ಅನುಮೋದನೆ ನೀಡಲಾಗಿದೆ.

ಶೂ ಮತ್ತು ಸಾಕ್ಸ್

ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ಸಂಸ್ಥೆಗಳಲ್ಲಿ ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭ್ಯರ್ಥಿಗಳಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಗಳಡಿ 10.22 ಕೋಟಿ ರೂ. ವೆಚ್ಚದಲ್ಲಿ ಶೂ ಮತ್ತು ಸಾಕ್ಸ್ ಉಚಿತವಾಗಿ ವಿತರಣೆ ಹಾಗೂ 47.84 ಕೋಟಿ ರೂ. ವೆಚ್ಚದಲ್ಲಿ ಟೂಲ್‌ಕಿಟ್ ಉಚಿತವಾಗಿ ನೀಡಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಟಿ.ಬಿ.ಜಯಚಂದ್ರ ಹೇಳಿದರು.

ರಬ್ಬರ್ ನೆಡುತೋಪು ಮರುನಾಟಿ

ದಕ್ಷಿಣ ಕನ್ನಡ ಜಿಲ್ಲೆಯ ಸುಬ್ರಮಣ್ಯ ಮತ್ತು ರಬ್ಬರ್ ವಿಭಾಗದ ಸುಳ್ಯ ಮತ್ತು ಪುತ್ತೂರು ತಾಲೂಕುಗಳಲ್ಲಿ 330 ಹೆಕ್ಟೇರ್ ಪ್ರದೇಶದಲ್ಲಿ 19.04 ಕೋಟಿ ರೂ ವೆಚ್ಚದಲ್ಲಿ ರಬ್ಬರ್ ನೆಡು ತೋಪು ಮರು ನಾಟಿ ಮಾಡಲು ಅನುಮೋದನೆ. ರಾಜ್ಯದ ಪ್ರಮುಖ ರಸ್ತೆಗಳಲ್ಲಿ ನೆಡುತೋಪು ಅಭಿವೃದ್ಧಿಗೆ ಯೋಜನೆಗಳ ಎಲ್ಲಾ ಶೇಕಡಾ ಒಂದರಷ್ಟು ಮೊತ್ತವನ್ನು ಉಪಕರವನ್ನಾಗಿ ಸಂಗ್ರಹಿಸಿ ಅಭಿವೃದ್ಧಿ ಪಡಿಸಲು ಒಪ್ಪಿಗೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ರಾಜ್ಯ ಹಣಕಾಸು ಸಂಸ್ಥೆಗೆ 75 ಕೋಟಿ ರೂ. ಷೇರು ಬಂಡವಾಳವನ್ನು ಒದಗಿಸಲು ಸಂಪುಟ ಅನುಮತಿ ನೀಡಿದೆ.

100 ರೂ.ಗೆ ವೈದ್ಯರ ವಜಾ



100 ರೂ. ಲಂಚ ಪಡೆದು ಲೋಕಾಯುಕ್ತ ದಾಳಿ ವೇಳೆ ಸಿಕ್ಕಿಬಿದ್ದ ಕೊಡಗಿನ ಸೋಮವಾರ ಪೇಟೆ ಸರ್ಕಾರಿ ವೈದ್ಯಾಧಿಕಾರಿ ಡಾ. ಶಂಕರಪ್ಪರನ್ನು ಸೇವೆಯಿಂದ ವಜಾಗೊಳಿಸಲಾಗಿದೆ. ಕಾರವಾರ ಬಂದರಿನಲ್ಲಿ ಅಲೆಗಳ ತಡೆಯಲು 820 ಮೀಟರ್ ಗೋಡೆ 125 ಕೋಟಿ ರೂ.ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ರಸ್ತೆ ಬದಿ ನೆಡುತೋಪು ನಿರ್ಮಿಸಲು ಯೋಜನಾ ವೆಚ್ಚಕ್ಕೆ ಶೇ.1ರಷ್ಟು ಉಪಕರ ವಿಧಿಸುವುದು ಹಾಗೂ ರಾಷ್ಟ್ರೀಯ ಗ್ರಾಮೀಣ ಆರೋಗ್ಯದಡಿ ಉಚಿತವಾಗಿ ರೋಗ ಪತ್ತೆಗಾಗಿ 41.77 ಕೋಟಿ ರೂ. ಅನುಮೋದನೆ ನೀಡಲಾಗಿದೆ.

ತಾರಾಲಯ ಸ್ಥಾಪನೆ

ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದ ಆವರಣದಲ್ಲಿ ಅತ್ಯಾಧುನಿಕ ತ್ರಿಡಿ ಡಿಜಿಟಲ್ 8ಎ ರೆಸೆಲ್ಯೂಷನಲ್ಲಿ 22 ಕೋಟಿ ರೂ. ವೆಚ್ಚದಲ್ಲಿ ತಾರಾಲಯ, ಗದಗ ಜಿಲ್ಲೆಯ ನರಗುಂದದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ನಿರ್ಮಿಸಲು 58 ಕೋಟಿ ರೂ., ಕಲ್ಬುರ್ಗಿಯಲ್ಲಿ ಲೋಕೋಪಯೋಗಿ ಇಲಾಖೆಗಳ ಇಂಜಿನಿಯರ್ ಕಟ್ಟಡಗಳ ನಿರ್ಮಾಣ 47.10 ಕೋಟಿ ರೂ, ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆಯಡಿ 103.53 ಕೋಟಿ ರೂ. ವೆಚ್ಚದಲ್ಲಿ ರೋಗಗಳ ಪತ್ತೆ ಹಚ್ಚುವ ವೈದ್ಯಕೀಯ ಡಯೋಗೋಸ್ಟಿಕ್ಸ್ ಯಂತ್ರಗಳ ಖರೀದಿಸುವುದು. ಜಿಲ್ಲಾಸ್ಪತ್ರೆಗಳಲ್ಲಿ ಸಿ ಟಿ ಸ್ಕ್ಯಾನ್, ಎಂಆರ್‌ಐ ಸ್ಕ್ಯಾನ್ ಡಯೋಗ್ನೋಸ್ಟಿಕ್ಸ್ ಉಪಕರಣ ಅಳವಡಿಸಲು ಒಪ್ಪಿಗೆ ನೀಡಲಾಗಿದ್ದು ಕೇಂದ್ರ ಸರ್ಕಾರ ರಾಜ್ಯಕ್ಕೆ 41.77 ಕೋಟಿ ರೂ ಅನುದಾನ ನೀಡಲಿದೆ ಎಂದರು.